ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 09-08-2019

## ಸುತ್ತೋಲೆ

ವಿಷಯ: ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡ ಸಿಬ್ಬಂದಿಗಳಿಗೆ ಕನಿಷ್ಠ ವೇತನ ನೀಡುವ ಬಗ್ಗೆ.

ಉಲ್ಲೇಖ 1) ಸಿಆಸು ಇಲಾಖೆಯ ಆದೇಶ ಸಂಖ್ಯೆ: ಸಿಆಸುಇ 20 ಸೇಸ್ಥಅ 94, ದಿನಾಂಕ: 21-11-1994.

2) ಕಾರ್ಮಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಕಾಇ 173 ಎಲ್‌ಎಂಡಬ್ಲ್ಯೂ 2006, ದಿನಾಂಕ: 30-04-2007.

3) ಕಾರ್ಮಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಕಾಇ 51 ಎಲ್‌ಡಬ್ಲ್ಯೂಎ 2017, ದಿನಾಂಕ: 29-12-2017.

4) ಕಾರ್ಮಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2019, ದಿನಾಂಕ: 28-03-2019.

*********

ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇಮಕಗೊಂಡ ದಿನಗೂಲಿಯ ನೌಕರರು ಆಯಾ ಹುದ್ದೆಗಳಲ್ಲಿ, ನಿರ್ವಹಿಸುತ್ತಿರುವ ಕೆಲಸಗಳು/ಕಾರ್ಯಭಾರಗಳು, ಕನಿಷ್ಠ ವೇತನದ ಕಾಯ್ದೆಯಡಿಯಲ್ಲಿ ಬರುವ ಉದ್ಯೋಗಗಳಲ್ಲಿನ ಆಯಾ ಹುದ್ದೆಗಳಿಗೆ ಸರಿಸಮಾನವಾದ ಪಕ್ಷದಲ್ಲಿ, ದಿನಗೂಲಿ ನೌಕರರಿಗೂ ಕೂಡ ಕನಿಷ್ಠ ವೇತನಕ್ಕಿಂತ ಕಡಿಮೆ ಇಲ್ಲದ ವೇತನವನ್ನು ನೀಡುವಂತೆ ಉಲ್ಲೇಖ (1)ರ ಆದೇಶದಲ್ಲಿ ಸೂಚಿಸಲಾಗಿರುತ್ತದೆ.

1948ರ ಕನಿಷ್ಠ ವೇತನದ ಕಾಯ್ದೆಯಡಿ ಬರುವ ಉದ್ಯೋಗಗಳಿಗೆ ಕಾಲಕಾಲಕ್ಕೆ ಕಾರ್ಮಿಕ ಇಲಾಖೆಯಿಂದ ಕನಿಷ್ಠ ವೇತನವನ್ನು ಪರಿಷ್ಕರಿಸಿ ಅಧಿಸೂಚನೆಗಳನ್ನು ಹೊರಡಿಸಲಾಗುತ್ತಿದೆ. ಆದರೆ ಕನಿಷ್ಠ ವೇತನದ ಅಧಿಸೂಚನೆಗಳಲ್ಲಿ, ದಿನಗೂಲಿಯನ್ನು ನಿಗದಿಪಡಿಸದೇ ಇರುವ ಕೆಲವು ಹುದ್ದೆಗಳಿಗೆ ಅಂದರೆ ಶೀಘ್ರಲಿಪಿಗಾರರು/ಬೆರಳಚ್ಚುಗಾರರು/ದ್ವಿತೀಯ ದರ್ಜೆ ಸಹಾಯಕರು ಇವರುಗಳಿಗೆ ಸಿನಿಮಾ ಉದ್ದಿಮೆಗಳಿಗೆ ನಿಗಧಿಪಡಿಸಿದ ಕನಿಷ್ಠ ವೇತನ ದರಗಳನ್ನು ಹಾಗೂ ಗ್ರೂಪ್ "ಡಿ" ಹುದ್ದೆಗಳ ನೌಕರರಿಗೆ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಉದ್ದಿಮೆಗಳಿಗೆ ನಿಗಧಿಪಡಿಸಿದ ಕನಿಷ್ಠ ದರಗಳನ್ನು ಅನ್ವಯಿಸಿಕೊಂಡು ದಿನಗೂಲಿ ವೇತನವನ್ನು ಮತ್ತು ಜೀವನ ನಿರ್ವಹಣೆಯ ಭತ್ಯೆಯನ್ನು ನೀಡುವ ಬಗ್ಗೆ ಉಲ್ಲೇಖ (2)ರ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ.

ಪ್ರಸ್ತುತ ಸರ್ಕಾರದ ವಿವಿಧ ಇಲಾಖೆಗಳು, ಸರ್ಕಾರಿ ಸ್ವಾಮ್ಯದ ನಿಗಮಗಳು, ಮಂಡಳಿಗಳು, ವಿಶ್ವವಿದ್ಯಾಲಯಗಳು, ಮಹಾವಿದ್ಯಾಲಯಗಳು, ಶಾಲೆಗಳು, ಸ್ಥಳೀಯ ಸಂಸ್ಥೆಗಳು, ಶಾಸನಬದ್ಧ ಸಂಸ್ಥೆಗಳು, ಸೊಸೈಟಿಗಳು, ಪರಿಷತ್ತುಗಳು, ಯಾವುದೇ ರೀತಿಯ ರಾಜ್ಯ ಸರ್ಕಾರದ ಅಧೀನ / ಸ್ವಾಯತ್ತ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡು ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಪಾವತಿಸಬೇಕಾದ ಕನಿಷ್ಠ ವೇತನ, ದುಡಿಮೆಯ ಗಂಟೆಗಳು, ರಜಾ ದಿನಗಳು ಇ.ಎಸ್.ಐ / ಪಿ.ಎಫ್ ಕಟಾವಣೆ ಬಗ್ಗೆ ಹಾಗೂ ಮಾನವ ಸಂಪನ್ಮೂಲ ಪೂರೈಸುವ ಗುತ್ತಿಗೆದಾರರು ನಿರ್ವಹಿಸುವ ಅಂಶಗಳ ಬಗ್ಗೆ ಸೂಕ್ತ ಮಾರ್ಗದರ್ಶನವನ್ನು ಉಲ್ಲೇಖ (3)ರ ಸುತ್ತೋಲೆಯಲ್ಲಿ ನೀಡಿ, ಇವುಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ತಿಳಿಸಲಾಗಿರುತ್ತದೆ.

ಆದಾಗ್ಯೂ ಸಹ ಅನೇಕ ಸರ್ಕಾರಿ ಇಲಾಖೆಗಳು, ಸಂಘ-ಸಂಸ್ಥೆಗಳು, ಸರ್ಕಾರಿ ಸ್ವಾಮ್ಯದ ಅಂಗ-ಸಂಸ್ಥೆಗಳು ಈ ಸುತ್ತೋಲೆಯಲ್ಲಿನ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸದೆ ನಿಗಧಿಪಡಿಸಿರುವ ಕನಿಷ್ಠ ವೇತನಗಳನ್ನು ಪ್ರತಿ ತಿಂಗಳು ಪಾವತಿಸುತ್ತಿಲ್ಲದೆ ಇರುವುದು ಹಾಗೂ ನೌಕರರ ವೇತನದಿಂದ ಕಟಾಯಿಸಿದ ಪಿ.ಎಫ್., ಇ.ಎಸ್.ಐ. ವಂತಿಗೆಗೆ ಮಾಲೀಕರ ಭಾಗದ ವಂತಿಗೆಯನ್ನು ಸೇರಿಸಿ ಇ.ಎಸ್.ಐ., ಪಿ.ಎಫ್ ಖಾತೆಗೆ ಜಮಾ ಮಾಡುತ್ತಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ ಉಲ್ಲೇಖ (3)ರ ಸುತ್ತೋಲೆಯಲ್ಲಿ ಹೇಳಲಾದ ಅಂಶಗಳನ್ನು ಸಂಬಂಧಪಟ್ಟ ಎಲ್ಲಾ ಸಂಸ್ಥೆಗಳು ಚಾಚೂ ತಪ್ಪದೆ ಪಾಲಿಸಿ ಅನುಷ್ಠಾನಕ್ಕೆ ತರತಕ್ಕದ್ದು. ಯಾವುದೇ ಇಲಾಖೆಗಳು, ಸಂಘ-ಸಂಸ್ಥೆಗಳು ಸದರಿ ಸುತ್ತೋಲೆಯಲ್ಲಿನ ಅಂಶಗಳನ್ನು ಜಾರಿಗೊಳಿಸುವಲ್ಲಿ ವಿಫಲವಾದಲ್ಲಿ, ಸರ್ಕಾರವು ಇಂತಹ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಅಂತಹ ಸಂಸ್ಥೆಗಳ ವಿರುದ್ಧ ಸೂಕ್ತ ಕಾನೂನಾತ್ಮಕ ಕ್ರಮ ಜರುಗಿಸಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

(ಕ್ಯಾಪ್ಟನ್, ಮಣಿವಣ್ಣನ್ ಪಿ)
ಸರ್ಕಾರದ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

ಇವರಿಗೆ,

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಈ ಸುತ್ತೋಲೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಸದರಿ ಪ್ರಕಟಣೆಯ 200 ಪ್ರತಿಗಳನ್ನು ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು-1 ಇವರಿಗೆ, ಕಳುಹಿಸುವಂತೆ ಕೋರಲಾಗಿದೆ.

ಪ್ರತಿಗಳು:-

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಮಹಾಲೇಖಪಾಲರು, ಲೆಕ್ಕಪತ್ರ/ಲೆಕ್ಕ ಪರಿಶೋಧನೆ, ಕರ್ನಾಟಕ, ಬೆಂಗಳೂರು.
3. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು ರವರಿಗೆ
4. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ)

6. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, (ಕಾರ್ಮಿಕ ಆಯುಕ್ತರ ಮೂಲಕ)
7. ಎಲ್ಲಾ ಜಿಲ್ಲೆಗಳ ವಿಭಾಗಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ)
8. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
10. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಶಾಖೆ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಶಾಖೆ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.